**7. ಸಚಿವರು, ಶಾಸಕರ ಶೇ.30ರಷ್ಟು ವೇತನ, ಭತ್ಯೆ ಕಡಿತ**

ಕೋವಿಡ್ ಪರಿಹಾರ ನಿಧಿಗಾಗಿ ಸಚಿವರು, ಶಾಸಕರು ಮತ್ತು ವಿಧಾನ ಪರಿಷತ್ ಸದಸ್ಯರ ವೇತನ ಮತ್ತು ಭತ್ಯೆಯಲ್ಲಿ ಶೇ.30ರಷ್ಟು ಕಡಿತ ಮಾಡಲು ರಾಜ್ಯ ಸರ್ಕಾರ ನಿರ್ಣಯ ಕೈಗೊಂಡಿದೆ. ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ, ವಿಧಾನ ಸಭಾಧ್ಯಕ್ಷರು, ಉಪ ಸಭಾಧ್ಯಕ್ಷರು, ಸಭಾಪತಿ ಮತ್ತು ಉಪ ಸಭಾಪತಿಯವರ ವೇತನ ಕಡಿತ ಮಾಡಲಾಗುವುದು. ಏಪ್ರಿಲ್‌ನಿಂದ ಮುಂದಿನ ವರ್ಷದ ಮಾರ್ಚ್‌ವರೆಗೆ ವೇತನ ಮತ್ತು ಭತ್ಯೆಯಲ್ಲಿ ಕಡಿತ ಮಾಡಲಾಗುವುದು. ಇದಕ್ಕಾಗಿ ಕರ್ನಾಟಕ ವಿಧಾನ ಸಭಾ ಸದಸ್ಯರು, ವಿಧಾನ ಪರಿಷತ್ ಸದಸ್ಯರು, ಸಚಿವರ ಸಂಬಳಗಳ ಅಧಿನಿಯಮ 1956ಕ್ಕೆ ತಿದ್ದುಪಡಿ ತಂದು ಸುಗ್ರೀವಾಜ್ಞೆ ಹೊರಡಿಸಲಾಗುತ್ತದೆಂದು ತಿಳಿಸಿದರು.

ಆಧಾರ:ಪ್ರಜಾವಾಣಿ, ದಿನಾಂಕ:10.04.2020